JULY 18, 2025

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯದಲ್ಲಿ ಪ್ರವಾಸೋದ್ಯಮ ಉತ್ತೇಜಿಸಲು, ಹಂಪಿ–ಬಾದಾಮಿ–ಐಹೊಳೆ–ಪಟ್ಟದಕಲ್ಲು, ವಿಜಯಪುರ ಒಳಗೊಂಡಂತೆ, ಉತ್ತರ ಕರ್ನಾಟಕ ಪ್ರವಾಸಿ ವೃತ್ತವನ್ನು ಸಾರ್ವಜನಿಕ, ಖಾಸಗಿ ಸಹಭಾಗಿತ್ವದ ಪಿ.ಪಿ.ಪಿ ಮಾದರಿಯಲ್ಲಿ ಅಭಿವೃದ್ಧಿಪಡಿಸಲು, ಒಟ್ಟು 166 ಕೋಟಿ 22 ಲಕ್ಷ ರೂಪಾಯಿ ವಿನಿಯೋಗಿಸಲು ರಾಜ್ಯ ಸಚಿವ ಸಂಪುಟ ಸಭೆ ತೀರ್ಮಾನಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಬೆಂಗಳೂರಿನಲ್ಲಿ ಜರುಗಿದ ಮಹತ್ವದ ಸಭೆಯಲ್ಲಿ, ರಾಯಚೂರು ಜಿಲ್ಲೆಯಲ್ಲಿ, 24 ಕೋಟಿ 50 ಲಕ್ಷ ರೂಪಾಯಿ ವೆಚ್ಚದಲ್ಲಿ ನೂತನ ಜವಳಿ ಪಾರ್ಕ್ ನಿರ್ಮಾಣ, ಹಾವೇರಿ ಜಿಲ್ಲೆ ಹಾನಗಲ್ ಯಳವಟ್ಟಿ ಗ್ರಾಮದ, 28 ಎಕರೆ 3 ಸೆಂಟ್ ಪ್ರದೇಶದಲ್ಲಿ ತೋಟಗಾರಿಕೆ ಬೆಳೆಗಳ ಬಹು ಉತ್ಪನ್ನ ನಿರ್ವಹಣೆ, ಸಂಸ್ಕರಣೆ ಘಟಕ– ಫುಡ್ ಪಾರ್ಕ್ ಅನ್ನು, 35 ಕೋಟಿ 7 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲು ಸಚಿವ ಸಂಪುಟ ಸಭೆಯಲ್ಲಿ ನಿರ್ಣಯಿಸಲಾಗಿದೆ.**

<><><>

**ಆತ್ಮನಿರ್ಭರ ಭಾರತ, ಪ್ರಧಾನಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆ–ಪಿ.ಎಂ.ಎಫ್.ಎಂ.ಇ, ಹಣಕಾಸು ಸಹಕಾರ ಯೋಜನೆಯಿಂದ, ನಗರ ಹಾಗೂ ಗ್ರಾಮೀಣ ಭಾಗದ ವಿವಿಧ ಸಣ್ಣ ಉದ್ದಿಮೆದಾರರಿಗೆ ಅನುಕೂಲವಾಗಿದೆ. ಪಿ.ಎಂ.ಎಫ್.ಎಂ.ಇ ಯೋಜನೆ ಫಲಾನುಭವಿ, ಹುಬ್ಬಳ್ಳಿಯ ಗುರುಸಿದ್ದೇಶ ಹಿರೇಮಠ, ಪ್ರದೇಶ ಸಮಾಚಾರಕ್ಕಾಗಿ ಅನಿಸಿಕೆ ಹಂಚಿಕೊಂಡಿದ್ದಾರೆ.**

<><><>

**ಧ್ವನಿ: ಗುರುಸಿದ್ದೇಶ ಹಿರೇಮಠ 37 ಸೆಕೆಂದುಗಳು**

<><><>

ಎರಡು ಸಾವಿರ ವರ್ಷಗಳ ಇತಿಹಾಸವಿರುವ ಕನ್ನಡದ ಸಾಂಸ್ಕೃತಿಕ ಶ್ರೀಮಂತಿಕೆ, ಇಡಿ ವಿಶ್ವಕ್ಕೆ ಮಾದರಿಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ, 2024-25 ನೇ ಸಾಲಿನ ಜೀವಮಾನ ಸಾಧನೆಯ ವಿವಿಧ ಪ್ರಶಸ್ತಿಗಳನ್ನು ಬೆಂಗಳೂರಿನಲ್ಲಿ ವಿತರಿಸಿ, ಪ್ರಶಸ್ತಿ ಪುರಸ್ಕೃತರನ್ನು ಅಭಿನಂದಿಸಿ ಅವರು ಮಾತನಾಡಿದರು. ಸಾಂಸ್ಕೃತಿಕ ಹಾಗೂ ಸಾಹಿತ್ಯ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಸಾಧಕರನ್ನು ಗುರುತಿಸಿ, ಗೌರವಿಸುವ ಕೆಲಸವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಾಡುತ್ತಿದೆ ಎಂದರು.

<><><>

'ಕನಕ ದೀಪ', ಬಾನುಲಿಯ 50 ಸಂಚಿಕೆಗಳ ಸಂಭ್ರಮದ ನಿಮಿತ್ತ, ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ, ಕನಕ ಅಧ್ಯಯನ ಪೀಠ, ಕನಕ ಸಭಾ ಭವನದಲ್ಲಿ, ಇಂದು ಮಧ್ಯಾಹ್ನ 2.30ಕ್ಕೆ, ಗ್ರಂಥ ಬಿಡುಗಡೆ, ಕನಕ ಗೀತ ಗಾಯನ ಹಾಗೂ ಸತ್ಕಾರ ಸಮಾರಂಭ ಜರುಗಲಿದೆ ಎಂದು, ಕನಕ ಅಧ್ಯಯನ ಪೀಠದ ಸಂಯೋಜಕ ಸಿ. ಹನುಮಗೌಡ ತಿಳಿಸಿದ್ದಾರೆ.

<><><>

ಯಾದಗಿರಿ ಜಿಲ್ಲೆಯಲ್ಲಿ, 'ಹೆಸರು' ಬೆಳೆಗೆ, ಅಲ್ಲಲ್ಲಿ ಹಳದಿ ನಂಜಾಣು ರೋಗ ಬಾಧೆ ಕಾಣಿಸಿಕೊಂಡಿದೆ; ರೈತರು ಕೃಷಿ ಇಲಾಖೆ ಸೂಚಿಸಿದ, ನಿರ್ವಹಣಾ ಕ್ರಮ ಪಾಲಿಸುವಂತೆ, ಕೃಷಿ ಇಲಾಖೆ ಸಹಾಯಕ ನಿರ್ದೇಶಕ, ಬಿ.ಸುರೇಶ ಹೇಳಿದ್ದಾರೆ. ಯಾದಗಿರಿ ಮತ್ತು ಗುರುಮಠಕಲ್ ತಾಲೂಕಿನಲ್ಲಿ, 9 ಸಾವಿರದ 6 ನೂರಾ 74 ಹೆಕ್ಟರ್ ಪ್ರದೇಶದಲ್ಲಿ, ಹೆಸರು ಬಿತ್ತನೆಯಾಗಿದೆ. 20 ರಿಂದ 25 ದಿನಗಳ ಬೆಳೆಗೆ, ಹಳದಿ ನಂಜಾಣು ರೋಗದ ಬಾಧೆ ಕಂಡು ಬಂದಲ್ಲಿ, ರೋಗಗ್ರಸ್ತ ಗಿಡಗಳನ್ನು ತೆರವು ಗೊಳಿಸಿ, ಪ್ರತಿ ಲೀಟರ್ ನೀರಿಗೆ, ಎರಡು ಮಿಲ್ಲಿ ಲೀಟರ್ ಬೇವಿನ ಎಣ್ಣೆ ಬೆರೆಸಿ ಸಿಂಪಡಣೆ ಮಾಡುವಂತೆ, ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗೆ, ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡುವಂತೆ, ಕೋರಲಾಗಿದೆ.

<><><>

ಚಿಕ್ಕಮಗಳೂರು ಜಿಲ್ಲೆ, ಮುಳ್ಳಯ್ಯನಗಿರಿ ಭಾಗದಲ್ಲಿ, ವಾಹನಗಳ ದಟ್ಟಣೆ ನಿಯಂತ್ರಿಸಲು, ಇನ್ನು ಮುಂದೆ ಜಿಲ್ಲಾಡಳಿತ, ಎರಡು ವಿಭಾಗಗಳಲ್ಲಿ, ವಾಹನಗಳನ್ನು ಪ್ರವಾಸಿ ತಾಣಗಳಿಗೆ ಬಿಡಲಿದೆ ಎಂದು, ಜಿಲ್ಲಾಧಿಕಾರಿ ಮೀನಾ ನಾಗರಾಜ ತಿಳಿಸಿದ್ದಾರೆ. ಪ್ರವಾಸಿಗರ ವಾಹನಗಳಿಗೆ, ಮುಂಗಡ ಬುಕ್ಕಿಂಗ್ ವ್ಯವಸ್ಥೆ ಕಲ್ಪಿಸಲಾಗುತ್ತಿದೆ. ಭೂಗರ್ಭ ಶಾಸ್ತ್ರಜ್ಞರ ಮುನ್ನೆಚ್ಚರಿಕೆ ಹಾಗೂ ಭೂ ಕುಸಿತ ಅಪಾಯದ ಹಿನ್ನೆಲೆ, ಜಿಲ್ಲಾಡಳಿತ ಈ ಕ್ರಮಕ್ಕೆ ಕೈಗೊಂಡಿದೆ.

<><><>

ಕಾನೂನು, ಸುವ್ಯವಸ್ಥೆ ನಿರ್ವಹಿಸುವಲ್ಲಿ, ಪೊಲೀಸ್‌ರ ಕರ್ತವ್ಯ ನಿರ್ವಹಣೆಯಲ್ಲಿ, ಸಮುದಾಯದ, ಪಾಲ್ಗೊಳ್ಳುವಿಕೆ ಹೆಚ್ಚಿಸಲು, 'ಮನೆ ಮನೆಗೆ ಪೊಲೀಸ್' ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು, ದಾವಣಗೆರೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ ತಿಳಿಸಿದ್ದಾರೆ. ದಾವಣಗೆರೆ ತಾಲೂಕು, ಹದಡಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ, 'ಮನೆ ಮನೆಗೆ ಪೊಲೀಸ್' ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಮಾತನಾಡಿದರು. ಅಪರಾಧ ಕೃತ್ಯಗಳನ್ನು ತಡೆಗಟ್ಟಲು, ಸಾಮಾಜಿಕ ಅಪರಾಧಗಳ ವಿರುದ್ಧ ಸಂಘಟಿತ ಹೋರಾಟ ನಡೆಸಲು, ನೂತನ ವ್ಯವಸ್ಥೆ ಸಮುದಾಯಕ್ಕೆ ಬಲ ತುಂಬಲಿದೆ, ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>